# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 961 |
| ಉತ್ತರಿಸಬೇಕಾದ ದಿನಾಂಕ | : | 24.02.2023. |
| ಸದಸ್ಯರ ಹೆಸರು | : | ಶ್ರೀ ಮಂಜುನಾಥ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ಸಚಿವರು | : | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು. |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ವಾರ್ಷಿಕವಾಗಿ ಎಲ್ಲೆಲ್ಲಿ ಕಂಬಳ ನಡೆಯುತ್ತಿದೆ. ಎಷ್ಟು ಕಂಬಳಗಳು ಸರ್ಕಾರಿ ಪ್ರಾಯೋಜಿತ್ವದಲ್ಲಿ ನಡೆಯುತ್ತಿದೆ. (ವಿವರ ನೀಡುವುದು) | ರಾಜ್ಯದಲ್ಲಿ ಪ್ರಮುಖ ಕಂಬಳಗಳನ್ನು ಕೆಳಕಾಣಿಸಿದ ಸ್ಥಳಗಳಲ್ಲಿ ಆಯೋಜಿಸಲಾಗುತ್ತಿವೆ. (ಕೆಳಗಿನ ಪಟ್ಟಿ ನೋಡಿ) |

| ಕ್ರಸ | ವಿವರ | ಕ್ರಸ | ವಿವರ |
|---|---|---|---|
| 1 | ಕಕ್ಯೆಪದವು | 12 | ಮಂಗಳೂರು |
| 2 | ವೇಣೂರು | 13 | ಪುತ್ತೂರು |
| 3 | ಬಾರಾಡಿ ಬೀಡು | 14 | ಐಕಳಬಾವ |
| 4 | ಶಿರ್ವ | 15 | ವಾಮಂಜೂರು |
| 5 | ಹೊಕ್ಕಾಡಿಗೋಳಿ | 16 | ಜಪ್ಪಿನಮೊಗರು |
| 6 | ಬಳ್ಳಮಂಜ | 17 | ಕಟಪಾಡಿ |
| 7 | ಮೂಡಬಿದಿರೆ | 18 | ಬಂಟ್ವಾಳ |
| 8 | ಮುಲ್ಕಿ ಅರಸು ಕಂಬಳ | 19 | ಉಪ್ಪಿನಂಗಡಿ |
| 9 | ಮಿಯ್ಯಾರು | 20 | ಬಂಗಾಡಿ |
| 10 | ಅಡ್ವೆ | 21 | ಪೈವಳಿಕೆ |
| 11 | ಸುರತ್ಕಲ್ | 22 | ಪಣಪಿಲ |

ಮೂಡುಬಿದಿರೆ ಹಾಗೂ ಕಾರ್ಕಳದ ಮಿಯ್ಯಾರಿನಲ್ಲಿ ಕಂಬಳ ಕರೆಗಳನ್ನು ನಿರ್ಮಿಸಲಾಗಿದೆ. ದಿನಾಂಕ: 08-01-2023 ಹಾಗೂ 09-01-2023 ರಂದು ಕಾರ್ಕಳದ ಮಿಯ್ಯಾರಿನಲ್ಲಿ ರಾಜ್ಯ ಮಟ್ಟದ ಗ್ರಾಮೀಣ ಕ್ರೀಡಾಕೂಟದ ಅಂಗವಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಪ್ರಾಯೋಜಿಸಲ್ಪಟ್ಟ ಕಂಬಳವನ್ನು ಆಯೋಜಿಸಲಾಗಿದೆ.

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಆ) | ಕಂಬಳ ನಡೆಸಲು ಸರ್ಕಾರದಿಂದ ಅನುದಾನ ನೀಡಲಾಗಿದೆಯೇ: ನೀಡಿದ್ದಲ್ಲಿ ಎಷ್ಟು ಮೊತ್ತ ನೀಡಲಾಗಿದೆ. ಅನುದಾನ ನೀಡುವ ಕುರಿತು ಮಾನದಂಡಗಳೇನು: ಕಳೆದ 3 | ನೀಡಲಾಗಿದೆ.<br><br>2019-20 ನೇ ಸಾಲಿನಲ್ಲಿ ಮೂಡುಬಿದಿರೆಯಲ್ಲಿ ನಡೆದ ಕೋಟಿ-ಚೆನ್ನಯ್ಯ ಜೋಡು ಕಂಬಳ ನಡೆಸಲು ಕಳೆದ ಮೂರು ವರ್ಷಗಳಲ್ಲಿ ಕರೆ ಕಂಬಳಕ್ಕೆ ರೂ 5.00 ಲಕ್ಷ ಅನುದಾನವನ್ನು |

| | | |
|---|---|---|
| | ವರ್ಷಗಳಿಗೆ ಸಂಬಂಧಿಸಿದಂತೆ ಕಂಬಳವಾರು ವಿವರ ನೀಡುವುದು | ನೀಡಲಾಗಿದೆ. ಕಂಬಳ ಆಯೋಜನೆಗೆ ಪ್ರಕರಣವಾರು ಪರಿಶೀಲಿಸಿ, ವಿಶೇಷ ಅನುದಾನ ಮಂಜೂರು ಮಾಡಲಾಗಿರುತ್ತದೆ. |
| ಇ) | ಕರ್ನಾಟಕ ರಾಜ್ಯದಲ್ಲಿ ಕಂಬಳವನ್ನು ಕ್ರೀಡಾ ಇಲಾಖೆಯ ವ್ಯಾಪ್ತಿಗೆ ತರಲು ಯೋಚಿಸಿದೆಯೇ: ಈ ಕುರಿತು ಸರ್ಕಾರದ ಕ್ರಮಗಳೇನು: (ವಿವರ ನೀಡುವುದು) | ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ಕರ್ನಾಟಕ ಸಂಘ ಸಂಸ್ಥೆಗಳ ನೋಂದಣಿ ನಿಯಮ 1960ರಡಿ ನೋಂದಾಯಿಸಲು ಬೈಲಾವನ್ನು ಮತ್ತು ಅಗತ್ಯ ದಾಖಲೆಗಳನ್ನು ಸಿದ್ಧಪಡಿಸಲು ಅಗತ್ಯ ಸಹಕಾರವನ್ನು ನೀಡುವಂತೆ ಈಗಾಗಲೇ ಜಿಲ್ಲಾಧಿಕಾರಿಗಳು, ಉಡುಪಿ ಜಿಲ್ಲೆ ಇವರಿಗೆ ಪತ್ರ ದಿನಾಂಕ 18-05-2022 ಮತ್ತು 13-09-2022 ರಲ್ಲಿ ಕೋರಿದೆ. ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸಿದ ನಂತರ, ಅಗತ್ಯ ದಾಖಲೆಗಳನ್ನು ಸಲ್ಲಿಸಿದಲ್ಲಿ, ಕರ್ನಾಟಕ ಕ್ರೀಡಾ ಪ್ರಾಧಿಕಾರದಿಂದ ರಾಜ್ಯ ಕ್ರೀಡಾ ಸಂಸ್ಥೆಯಾಗಿ ಮಾನ್ಯತೆ ನೀಡಲಾಗುವುದು. |
| ಈ | ರಾಜ್ಯದಲ್ಲಿ ಈ ಕಂಬಳವನ್ನು ಪ್ರೋತ್ಸಾಹಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು: ಕಂಬಳ ಸಂಘಟನೆ ಮತ್ತು ಒಕ್ಕೂಟ ರಚಿಸಲು ಸರ್ಕಾರ ಏನು ಕ್ರಮವಹಿಸಿದೆ: ಕಳೆದ ಒಂದು ವರ್ಷದಿಂದ ಕೈಗೊಂಡ ಕ್ರಮಗಳ ವಿವರ ನೀಡುವುದು: | ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿನ ಸಾಂಪ್ರದಾಯಿಕ ಕಂಬಳ ಕ್ರೀಡೆಯನ್ನು ಪ್ರೋತ್ಸಾಹಿಸುವ ಸಂಬಂಧ ಕಂಬಳ ಕ್ರೀಡಾ ಕ್ಷೇತ್ರದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಸಾಧಕ ಕ್ರೀಡಾಪಟುಗಳಿಗೆ ರೂ 1.00 ಲಕ್ಷ ನಗದು ಪುರಸ್ಕಾರ ಮತ್ತು ಸ್ಮರಣಿಕೆಯನ್ನೊಳಗೊಂಡ 'ಕರ್ನಾಟಕ ಕ್ರೀಡಾ ರತ್ನ' ಪ್ರಶಸ್ತಿಯನ್ನು ನೀಡಲಾಗಿದೆ.<br><br>ಕ್ರೀಡಾ ಕ್ಷೇತ್ರದ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿರುವ ಸಂಸ್ಥೆಗಳನ್ನು ಗುರುತಿಸಿ ರೂ 5.00 ಲಕ್ಷ ನಗದು ಪುರಸ್ಕಾರ ಮತ್ತು ಸ್ಮರಣಿಕೆಯನ್ನು ಒಳಗೊಂಡ ಕ್ರೀಡಾ ಪೋಷಕ ಪ್ರಶಸ್ತಿಯನ್ನು ನೀಡಲಾಗುತ್ತಿದ್ದು, 2017-18ನೇ ಸಾಲಿನ ಕಂಬಳ ಕ್ರೀಡೆಯ ಬೆಳವಣಿಗೆಗೆ ಗಣನೀಯ ಕೊಡುಗೆ ನೀಡಿರುವ ಕಂಬಳ ಸಂರಕ್ಷಣೆ, ನಿರ್ವಹಣೆ ಮತ್ತು ತರಬೇತಿ ಅಕಾಡೆಮಿ (ರಿ), ಕಾರ್ಕಳ, ಉಡುಪಿ ಜಿಲ್ಲೆ ಈ ಸಂಸ್ಥೆಗೆ 'ಕ್ರೀಡಾ ಪೋಷಕ' ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ.<br><br>ದಿನಾಂಕ 08-01-2023 ಮತ್ತು 09-01-2023 ರಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಉಡುಪಿ ಜಿಲ್ಲೆಯ ಮಿಯ್ಯಾರಿನಲ್ಲಿ ಗ್ರಾಮೀಣ ಕ್ರೀಡೋತ್ಸವ ಕ್ರೀಡಾಕೂಟ ಆಯೋಜನೆ ಅಂಗವಾಗಿ ಕಂಬಳ ಕ್ರೀಡೆಯನ್ನು ಯಶಸ್ವಿಯಾಗಿ ಆಯೋಜಿಸಲಾಗಿದೆ. |
| ಉ | ದಿನಾಂಕ: 19-04-2022 ರಂದು ನಡೆದ ಸಭೆಯ ನಿರ್ಣಯಗಳಾವುವು: ಈ ನಿರ್ಣಯಗಳನ್ನು ಕಾರ್ಯರೂಪಕ್ಕೆ ತರಲಾಗಿದೆಯೇ: ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು? (ದಾಖಲೆಗಳೊಂದಿಗೆ ವಿವರ ನೀಡುವುದು) | ಮಾನ್ಯ ವಿಧಾನ ಪರಿಷತ್ತಿನ ಸಭಾಪತಿಯವರ ಅಧ್ಯಕ್ಷತೆಯಲ್ಲಿ ಮಾನ್ಯ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರುಗಳ ಉಪಸ್ಥಿತಿಯಲ್ಲಿ ದಿನಾಂಕ: 19-04-2022ರಂದು ನಡೆದ ಸಭೆಯಲ್ಲಿ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸಿ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಮಾನ್ಯತೆ ಪಡೆಯುವ ಕುರಿತಂತೆ ಬೈಲಾ ಸಿದ್ಧಪಡಿಸಿ ಮಾನ್ಯತೆಗಾಗಿ ಸಲ್ಲಿಸುವಂತೆ ತೀರ್ಮಾನಿಸಲಾಗಿದೆ.<br><br>ಅದರಂತೆ, ಜಿಲ್ಲಾಧಿಕಾರಿಗಳು, ದಕ್ಷಿಣ ಕನ್ನಡ ಜಿಲ್ಲೆ ಇವರಿಗೆ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸುವ ಸಂಬಂಧ ಸೂಕ್ತ ಸಹಕಾರವನ್ನು ನೀಡುವಂತೆ ದಿನಾಂಕ 18-05-2022 ರ ಪತ್ರದಲ್ಲಿ ಕೋರಿದೆ. |

| | | |
|---|---|---|
| | | ದಿನಾಂಕ 17-06-2022 ರಂದು ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ರಚಿಸಲು ಬೈಲಾ ಮತ್ತು ಮಾರ್ಗಸೂಚಿಯನ್ನು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆ ಕಂಬಳ ಕ್ರೀಡೆಯ ಅಧ್ಯಕ್ಷರುಗಳು ಹಾಗೂ ಪದಾಧಿಕಾರಿಗಳನ್ನೊಳಗೊಂಡ ಪೂರ್ವಭಾವಿ ಸಭೆಯನ್ನು ನಡೆಸಲಾಗಿದೆ. ಸದರಿ ಸಭೆಯಲ್ಲಿ ಬೈಲಾ ಮತ್ತು ಮಾರ್ಗಸೂಚಿಗಳಲ್ಲಿ ಬದಲಾವಣೆಗಳನ್ನು ಕೈಗೊಂಡು ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿಗಳ ಸಮಕ್ಷಮ ಉಭಯ ಜಿಲ್ಲೆಗಳ ಜನಪ್ರತಿನಿಧಿಗಳು, ಕಂಬಳ ಕ್ರೀಡಾಸಕ್ತರು, ಕಂಬಳ ಆಯೋಜಕರು, ಕಂಬಳ ಕೋಣಗಳ ಮಾಲೀಕರು, ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಹಾಗೂ ತಜ್ಞರ ಸಭೆ ನಡೆಸಿ ಅನುಮೋದನೆ ಪಡೆದು ಬೈಲಾವನ್ನು ಅಂತಿಮಗೊಳಿಸಿ ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯನ್ನು ಕರ್ನಾಟಕ ಸಂಘ ಸಂಸ್ಥೆಗಳ ನೋಂದಣಿ ನಿಯಮ 1960ರಡಿ ನೋಂದಾಯಿಸಲು ಕ್ರಮಕೈಗೊಳ್ಳಲು ತೀರ್ಮಾನಿಸಲಾಗಿದೆ.<br><br>ಕರ್ನಾಟಕ ರಾಜ್ಯ ಕಂಬಳ ಸಂಸ್ಥೆಯು ರಚನೆಗೊಂಡು ಅಗತ್ಯ ದಾಖಲಾತಿಯೊಂದಿಗೆ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ಮಾನ್ಯತೆಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಪ್ರಸ್ತಾವನೆಯನ್ನು ಪರಿಶೀಲಿಸಿ ಕರ್ನಾಟಕ ಕ್ರೀಡಾ ಪ್ರಾಧಿಕಾರದಲ್ಲಿ ರಾಜ್ಯ ಕಂಬಳ ಸಂಸ್ಥೆಗೆ ರಾಜ್ಯ ಕ್ರೀಡಾ ಸಂಸ್ಥೆಯಾಗಿ ಮಾನ್ಯತೆ ನೀಡಲು ಮತ್ತು ನಿಯಮಾನುಸಾರ ಅನುದಾನ ನೀಡಲು ಕ್ರಮವಹಿಸಲಾಗುವುದು. |

**ವೈಎಸ್‌ಡಿ/ಇಬಿಬಿ/25/2023**

**(ಡಾ|| ಕೆ.ಸಿ. ನಾರಾಯಣಗೌಡ)**
ರೇಷ್ಮೆ, ಯುವ ಸಬಲೀಕರಣ ಮತ್ತು
ಕ್ರೀಡಾ ಸಚಿವರು.